**All India Radio: Bangalore**
**National Bulletin In Kannada**
**29.05.2026 1.10 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**29.05.2026 1.10 p.m.**
**<><><><>**

ಮುಖ್ಯಾಂಶಗಳು

1. ಸಮಾಜದಲ್ಲಿ ಸೌಹಾರ್ದತೆ ಕಾಪಾಡಲು ಆಂತರಿಕ ಶಾಂತಿ ಅತ್ಯಗತ್ಯ - ಬೆಂಗಳೂರಿನಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅಭಿಮತ
2. ಕಾಯ್ದಿರಿಸಿದ ತೀರ್ಪುಗಳನ್ನು ಮೂರು ತಿಂಗಳೊಳಗಾಗಿ ಪ್ರಕಟಿಸಲು ದೇಶದ ಎಲ್ಲ ಉಚ್ಚ ನ್ಯಾಯಾಲಯಗಳಿಗೆ ಸುಪ್ರೀಂಕೋರ್ಟ್ ನಿರ್ದೇಶನ
3. ನ್ಯೂಯಾರ್ಕ್‌ನಲ್ಲಿ ೫೦ಕ್ಕೂ ಹೆಚ್ಚು ವ್ಯಾಪಾರ ಮತ್ತು ಕೈಗಾರಿಕಾ ನಾಯಕರೊಂದಿಗೆ ಕೇಂದ್ರ ಸಚಿವ ಪಿಯೂಷ್ ಗೋಯಲ್ ದುಂಡುಮೇಜಿನ ಸಭೆ
4. ಪ್ರಸಕ್ತ ವರ್ಷದ ನೈಋತ್ಯ ಮುಂಗಾರು ಹಂಗಾಮಿನಲ್ಲಿ ದೇಶದಾದ್ಯಂತ ವಾಡಿಕೆಗಿಂತ ಕಡಿಮೆ ಮಳೆ ಸಾಧ್ಯತೆ - ಹವಾಮಾನ ಇಲಾಖೆ ಮುನ್ಸೂಚನೆ
5. ಐಎಪಿಎಲ್ ಟಿ-೨೦ ಕ್ರಿಕೆಟ್; ಎರಡನೇ ಕ್ವಾಲಿಫೈಯರ್‌ನಲ್ಲಿಂದು ಗುಜರಾತ್ ಟೈಟನ್ಸ್ - ರಾಜಸ್ತಾನ್ ರಾಯಲ್ಸ್ ಮುಖಾಮುಖಿ

<><><><>

ಸಮಾಜದಲ್ಲಿ ಸೌಹಾರ್ದತೆ ಕಾಪಾಡಲು ಆಂತರಿಕ ಶಾಂತಿ ಅತ್ಯಗತ್ಯ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಿಳಿಸಿದ್ದಾರೆ. ಇಂದು ಬೆಳಗ್ಗೆ ಬೆಂಗಳೂರಿನ ಹೊರವಲಯದಲ್ಲಿರುವ ಆರ್ಟ್ ಆಫ್ ಲಿವಿಂಗ್ ಪ್ರತಿಷ್ಠಾನದ ೪೫ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಜಾಗತಿಕ ಸಂಘರ್ಷ ಹಾಗೂ ಅನಿಶ್ಚಿತತೆಯ ನಡುವೆ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ಶಾಂತಿ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರಚಾರ ಪಡಿಸುವ ಮೂಲಕ ವಿಶ್ವಶಾಂತಿಗೆ ಕೊಡುಗೆ ನೀಡುತ್ತಿದೆ ಎಂದರು. ೧೮೧ ರಾಷ್ಟ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆರ್ಟ್ ಆಫ್ ಲಿವಿಂಗ್ ಕೇಂದ್ರಗಳು ಜನ ಜೀವನ ಸುಧಾರಿಸುವಲ್ಲಿ ಮಹತ್ತರ ಪಾತ್ರ ವಹಿಸಿವೆ. ಗ್ರಾಮೀಣಾಭಿವೃದ್ಧಿ, ಪರಿಸರ, ಆಧ್ಯಾತ್ಮಿಕತೆ ಹೀಗೆ ಹಲವಾರು ವಲಯಗಳಲ್ಲಿ ಆರ್ಟ್ ಆಫ್ ಲಿವಿಂಗ್

ಸಂಸ್ಥೆ ಸಮಾಜ ಸುಧಾರಣೆಗೆ ಕೈಜೋಡಿಸಿದೆ ಎಂದು ತಿಳಿಸಿದರು. ಭಕ್ತಿ ಎನ್ನುವ ಚಿಂತನೆಯ ಕುರಿತು ಸಾಮಾನ್ಯವಾಗಿ ಗೊಂದಲವಿದೆ. ಕೇವಲ ದೇವರನ್ನು ಪೂಜಿಸುವುದಷ್ಟೇ ಭಕ್ತಿಯಲ್ಲ, ಭಕ್ತಿ ಎಂದರೆ ಬದ್ಧತೆಯಾಗಿದೆ. ನಮ್ಮ ಬಗ್ಗೆ ನಾವು ಬದ್ಧತೆ ಹೊಂದಿರಬೇಕು. ಕುಟುಂಬದ ಕುರಿತಾಗಿ, ಸಮಾಜ, ದೇಶ ಹಾಗೂ ಮಾನವೀಯತೆಯ ಕುರಿತು ಹೊಂದಿರುವ ಬದ್ಧತೆಯೇ ಭಕ್ತಿಯಾಗಿದೆ. ಪ್ರತಿಯೊಬ್ಬರೊಂದಿಗೂ ಶಾಂತಿಯಿಂದ ಸಹಬಾಳ್ವೆ ನಡೆಸುವುದನ್ನು ಭಕ್ತಿ ತಿಳಿಸಿಕೊಡುತ್ತದೆ. ಜೀವಿಸುವುದೂ ಒಂದು ಕಲೆಯಾಗಿದ್ದು, ದಿನವೂ ಆನಂದದಿಂದ ಜೀವಿಸುವ ಕಲೆಯನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಆಧ್ಯಾತ್ಮಿಕ ಜ್ಞಾನವನ್ನು ಸರಳ ಭಾಷೆಯಲ್ಲಿ ತಿಳಿಸಿಕೊಡುವ ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಪ್ರಯತ್ನದಿಂದ ಜನಸಾಮಾನ್ಯರಿಗೆ ಅನುಕೂಲವಾಗಿದೆ. ವಿಕಸಿತ ಭಾರತ ನಿರ್ಮಾಣಕ್ಕೆ ಆರ್ಥಿಕ ಪ್ರಗತಿಯೊಂದಿಗೆ ಆಧ್ಯಾತ್ಮಿಕ ಬೆಳವಣಿಗೆಯೂ ಅತ್ಯಗತ್ಯ. ಈ ನಿಟ್ಟಿನಲ್ಲಿ ಆರ್ಟ್ ಆಫ್ ಲಿವಿಂಗ್ ಸಮಾಜಕ್ಕೆ ಸಕಾರಾತ್ಮಕ ಕೊಡುಗೆ ನೀಡುತ್ತಿದೆ ಎಂದರು. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದಿನಿಂದ ಇದೇ ೩೧ರವರೆಗೆ ಕರ್ನಾಟಕ, ಗೋವಾ ಮತ್ತು ಕೇರಳಂ ರಾಜ್ಯಗಳ ಪ್ರವಾಸದ ಭಾಗವಾಗಿ ಬೆಂಗಳೂರಿಗೆ ಭೇಟಿ ನೀಡಿದ್ದರು. ಇಂದು ದಾವಣಗೆರೆಯಲ್ಲಿ ಬಿಡಿಟಿ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದ ಅಮೃತ ಮಹೋತ್ಸವದಲ್ಲಿ ಅವರು ಪಾಲ್ಗೊಳ್ಳಲಿದ್ದಾರೆ. ನಾಳೆ ಉಪರಾಷ್ಟ್ರಪತಿ ಅವರು ಗೋವಾಗೆ ತೆರಳಿ, ಪಣಜಿಯಲ್ಲಿ ಗೋವಾ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ಸಿಎಸ್ಐಆರ್ ರಾಷ್ಟ್ರೀಯ ಸಾಗರ ಶಾಸ್ತ್ರ ಸಂಸ್ಥೆಗೆ ಭೇಟಿ ನೀಡಲಿದ್ದಾರೆ. ಇದೇ ೩೧ ರಂದು ಉಪರಾಷ್ಟ್ರಪತಿಗಳು ಕರ್ನಾಟಕದ ಬೆಳ್ತಂಗಡಿಯಲ್ಲಿ ಸಿರಿ ಕೈಗಾರಿಕಾ ಪಾರ್ಕ್ ಉದ್ಘಾಟಿಸಲಿದ್ದು, ಬಳಿಕ ಶ್ರೀಕ್ಷೇತ್ರ ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ. ಅದೇ ದಿನ ಅವರು ಕೇರಳಂಗೆ ತೆರಳಿ ಕೊಟ್ಟಾಯಂನಲ್ಲಿ ಮಲಯಾಳಂ ದಿನ ಪತ್ರಿಕೆ ದೀಪಿಕಾದ ೧೪೦ನೇ ವಾರ್ಷಿಕೋತ್ಸವನ್ನು ಉದ್ಘಾಟಿಸಲಿದ್ದಾರೆ.

<><><><>

ಕಾಯ್ದಿರಿಸಿದ ತೀರ್ಪುಗಳನ್ನು ಮೂರು ತಿಂಗಳೊಳಗಾಗಿ ಪ್ರಕಟಿಸಬೇಕು ಎಂದು ದೇಶದ ಎಲ್ಲ ಉಚ್ಛ ನ್ಯಾಯಾಲಯಗಳಿಗೆ ಸುಪ್ರೀಂಕೋರ್ಟ್ ಇಂದು ಮಹತ್ವದ ನಿರ್ದೇಶನ ನೀಡಿದೆ.

ತೀರ್ಪುಗಳನ್ನು ಪ್ರಕಟಿಸುವಲ್ಲಿ ಉಂಟಾಗುವ ವಿಳಂಬವು ದಾವೆದಾರರಿಗೆ ತುಂಬಲಾರದ ನಷ್ಟವನ್ನು ಉಂಟುಮಾಡಬಹುದು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ವೈಯಕ್ತಿಕ ಸ್ವಾತಂತ್ರ್ಯಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿ ತ್ವರಿತ ನಿರ್ಧಾರಗಳ ಅಗತ್ಯವನ್ನು ಒತ್ತಿಹೇಳಿದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜಾಯ್‌ಮಾಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು, ಜಾಮೀನು ಅರ್ಜಿಗಳ ಮೇಲಿನ ಆದೇಶಗಳನ್ನು ಅದೇ ದಿನ ಪ್ರಕಟಿಸಬೇಕು ಮತ್ತು ಒಂದು ವೇಳೆ ಆದೇಶವನ್ನು ಕಾಯ್ದಿರಿಸಿದರೆ, ಮರುದಿನವೇ ಅದನ್ನು ಪ್ರಕಟಿಸಿ ಜಾಲತಾಣಕ್ಕೆ ಅಪ್‌ಲೋಡ್ ಮಾಡಬೇಕು ಎಂದು ತಿಳಿಸಿದೆ. ಹಲವಾರು ಪ್ರಮುಖ ನಿರ್ದೇಶನಗಳನ್ನು ಹೊರಡಿಸಿದ ಸುಪ್ರೀಂ ಕೋರ್ಟ್, ಜಾಮೀನು ಅಥವಾ ಶಿಕ್ಷೆ ಅಮಾನತುಗೊಳಿಸುವ ಆದೇಶವನ್ನು ಪ್ರಕಟಿಸಿದ ತಕ್ಷಣವೇ ಜೈಲು ಅಧಿಕಾರಿಗಳಿಗೆ ತಲುಪಿಸಬೇಕು ಮತ್ತು ವಿಚಾರಣಾಧೀನ ಕೈದಿಯನ್ನು ಆದಷ್ಟು ಅದೇ ದಿನ ಅಥವಾ ಹೆಚ್ಚೆಂದರೆ ಮರುದಿನವೇ ಬಿಡುಗಡೆ ಮಾಡಬೇಕು ಎಂದು ಸ್ಪಷ್ಟಪಡಿಸಿದೆ.

<><><><>

ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಇಂದು ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ ಮತ್ತು ತಕ್ಷಣದಿಂದ ಜಾರಿಗೆ ಬರುವಂತೆ ಸಚಿವ ಸಂಪುಟವನ್ನು ವಿಸರ್ಜಿಸಿದ್ದಾರೆ. ಆದಾಗ್ಯೂ, ಹಂಗಾಮಿ ಮುಖ್ಯಮಂತ್ರಿಯಾಗಿ ಪರ್ಯಾಯ ವ್ಯವಸ್ಥೆ ಮಾಡುವವರೆಗೆ ಅವರು ಅಧಿಕಾರದಲ್ಲಿ ಮುಂದುವರಿಯುವಂತೆ ಮತ್ತು ಈ ಅವಧಿಯಲ್ಲಿ ಯಾವುದೇ ಕಾರ್ಯಕಾರಿ ನಿರ್ಧಾರಗಳನ್ನು ತೆಗೆದುಕೊಳ್ಳದಂತೆ ಅವರನ್ನು ಕೋರಲಾಗಿದೆ. ನಿನ್ನೆ ಲೋಕಭವನದಲ್ಲಿ ಸಿದ್ದರಾಮಯ್ಯ ಅವರು ತಮ್ಮ ರಾಜೀನಾಮೆ ಪತ್ರವನ್ನು ಸಲ್ಲಿಸಿದ್ದರು.

<><><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಇಂಕ್ಯೂ ಹೆಚ್ಚು ವ್ಯಾಪಾರ ಮತ್ತು ಕೈಗಾರಿಕಾ ನಾಯಕರೊಂದಿಗೆ ದುಂಡುಮೇಜಿನ ಸಭೆಯಲ್ಲಿ ಭಾಗವಹಿಸಿದರು. ನ್ಯೂಯಾರ್ಕ್‌ನಲ್ಲಿರುವ ಭಾರತೀಯ ಕಾನ್ಸುಲೇಟ್ ಜನರಲ್, ಅಮೆರಿಕ-ಭಾರತ ಕಾರ್ಯತಂತ್ರದ ಪಾಲುದಾರಿಕೆ ವೇದಿಕೆಯ ಸಹಯೋಗದೊಂದಿಗೆ ಈ ದುಂಡುಮೇಜಿನ ಸಭೆಯನ್ನು ಆಯೋಜಿಸಿತ್ತು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ಸಚಿವರು,

ಸಭೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತದ ಸದೃಢ ಆರ್ಥಿಕ ಪ್ರಗತಿ, ಸುಧಾರಣಾ ಆಧಾರಿತ ವ್ಯಾಪಾರ ವಾತಾವರಣ ಹಾಗೂ ಜಾಗತಿಕ ಹೂಡಿಕೆದಾರರಿಗೆ ವಿಸ್ತರಿಸುತ್ತಿರುವ ಬೃಹತ್ ಅವಕಾಶಗಳ ಕುರಿತು ಉಲ್ಲೇಖಿಸಿರುವುದಾಗಿ ತಿಳಿಸಿದ್ದಾರೆ. ಪರಸ್ಪರ ಸಹಭಾಗಿತ್ವ ಮತ್ತು ಹಂಚಿಕೆಯ ಸಮೃದ್ಧಿಗಾಗಿ ಭಾರತ ಹಾಗೂ ಅಮೆರಿಕ ನಡುವಿನ ವ್ಯಾಪಾರ, ಹೂಡಿಕೆ, ನಾವೀನ್ಯತೆ ಮತ್ತು ಪೂರೈಕೆ ಸರಪಳಿ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ವಿವಿಧ ಮಾರ್ಗಗಳ ಕುರಿತು ಚರ್ಚಿಸಲಾಗಿದೆ ಎಂದು ಅವರು ಹೇಳಿದ್ದಾರೆ.

<><><>

ಜೂನ್‌ನಿಂದ ಸೆಪ್ಟೆಂಬರ್‌ವರೆಗೆ ನಡೆಯಲಿರುವ ಪ್ರಸಕ್ತ ವರ್ಷದ ನೈಋತ್ಯ ಮುಂಗಾರು ಹಂಗಾಮಿನಲ್ಲಿ ದೇಶದಾದ್ಯಂತ ವಾಡಿಕೆಗಿಂತ ಕಡಿಮೆ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ನವದೆಹಲಿಯಲ್ಲಿಂದು ಸುದ್ದಿ ಗೋಷ್ಠಿಯಲ್ಲಿ ಮಾಹಿತಿ ನೀಡಿದ ಭೂ ವಿಜ್ಞಾನ ಸಚಿವಾಲಯದ ಕಾರ್ಯದರ್ಶಿ ಡಾ. ಎಂ. ರವಿಚಂದ್ರನ್, ಈ ಅವಧಿಯಲ್ಲಿ ದೇಶದ ನೈಋತ್ಯ ಮುಂಗಾರು ಹಂಗಾಮಿನ ಮಳೆಯು ದೀರ್ಘಾವಧಿ ಸರಾಸರಿಯ ಶೇಕಡಾ ೯೦ ರಷ್ಟಾಗುವ ಸಾಧ್ಯತೆಯಿದೆ ಎಂದು ತಿಳಿಸಿದರು. ಮುಂಗಾರು ಹಂಗಾಮಿನಲ್ಲಿ ಈಶಾನ್ಯ ಭಾರತದಲ್ಲಿ ವಾಡಿಕೆ ಮಳೆಯಾಗುವ ಸಾಧ್ಯತೆಯಿದ್ದು, ಮಧ್ಯ ಭಾರತ, ದಕ್ಷಿಣ ಪರ್ಯಾಯ ದ್ವೀಪ ಮತ್ತು ವಾಯುವ್ಯ ಭಾರತದಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆಯಿದೆ. ಅಲ್ಲದೆ, ಮುಂಗಾರು ಅವಧಿಯಲ್ಲಿ 'ಎಲ್ ನಿನೋ' ಪರಿಸ್ಥಿತಿಗಳು ಸೃಷ್ಟಿಯಾಗುವ ಸಾಧ್ಯತೆಗಳು ಹೆಚ್ಚಾಗಿವೆ ಎಂದು ಅವರು ಹೇಳಿದರು.

<><><>

ಭಾರತ ತನ್ನ ಶುದ್ಧ ಇಂಧನ ಉತ್ಪಾದನಾ ಪಯಣದಲ್ಲಿ ಐತಿಹಾಸಿಕ ಮೈಲಿಗಲ್ಲೊಂದನ್ನು ಸಾಧಿಸಿದೆ. ಕೇಂದ್ರದ 'ಪ್ರಧಾನಮಂತ್ರಿ ಸೂರ್ಯ ಘರ್' ಯೋಜನೆಯಡಿ ದೇಶದ ೪೦ ಲಕ್ಷ ಮನೆಗಳಿಗೆ ಈಗ ಛಾವಣಿ ಮೇಲಿನ ಸೌರ ವಿದ್ಯುತ್ ಸೌಲಭ್ಯವನ್ನು ಕಲ್ಪಿಸುವ ಮೂಲಕ ಸಬಲೀಕರಣಗೊಳಿಸಲಾಗಿದೆ ಎಂದು ಕೇಂದ್ರ ನೂತನ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರು ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಈ ಪರಿವರ್ತನಾತ್ಮಕ ಯೋಜನೆಯು ಕೇವಲ ಒಂದು

ನವೀಕರಿಸಬಹುದಾದ ಇಂಧನ ಉಪಕ್ರಮವಾಗಿರದೆ, ದೇಶದ ನಾಗರಿಕರನ್ನು ವಿದ್ಯುತ್ ಗ್ರಾಹಕರಿಂದ ವಿದ್ಯುತ್ ಉತ್ಪಾದಕರನ್ನಾಗಿ ಪರಿವರ್ತಿಸುತ್ತಿದೆ ಎಂದು ಹೇಳಿದ್ದಾರೆ.

<><><><>

ಮಾರ್ಚ್ ೨೮ರಿಂದ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ ಅಂತಿಮ ಘಟ್ಟ ತಲುಪುತ್ತಿದ್ದು, ಇಂದು ನಡೆಯಲಿರುವ ಎರಡನೇ ಕ್ವಾಲಿಫೈಯರ್‌ನ ಪ್ರಮುಖ ಹಣಾಹಣಿಯಲ್ಲಿ ಗುಜರಾತ್ ಟೈಟನ್ಸ್ ಹಾಗೂ ರಾಜಸ್ತಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಫೈನಲ್‌ಗೇರುವ ಮತ್ತೊಂದು ಅವಕಾಶವಾಗಿ ಗುಜರಾತ್ ಟೈಟನ್ಸ್, ಮೊದಲನೇ ಕ್ವಾಲಿಫೈಯರ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಸೋತು, ಈ ಪಂದ್ಯದ ಮೂಲಕ ಫೈನಲ್‌ಗೇರುವ ತವಕದಲ್ಲಿದ್ದರೆ, ಎಲಿಮಿನೇಟರ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡವನ್ನು ಮಣಿಸಿ, ಗೆಲುವಿನ ಭರವಸೆಯೊಂದಿಗೆ ರಾಜಸ್ತಾನ್ ರಾಯಲ್ಸ್ ತಂಡ ಕಣಕ್ಕಿಳಿಯುತ್ತಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ ಇದೇ ೩೧ರಂದು ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಫೈನಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಐಪಿಎಲ್-೨೦೨೫ ಟ್ರೋಫಿಗಾಗಿ ಸೆಣಸಾಟ ನಡೆಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>